# ಅಧಿವೇಶನ ದಿನಾಂಕ ಪ್ರಕಟಿಸಿ

**ವಿಕ ಸುದ್ದಿಲೋಕ** ಹುಬ್ಬಳ್ಳಿ

ಮುಂಬರುವ ವಿಧಾನ ಮಂಡಲ ಚಳಿಗಾಲದ ಅಧಿವೇಶನವನ್ನು ನವೆಂಬರ್ ಅಂತ್ಯದಲ್ಲಿ ಅಥವಾ ಡಿಸೆಂಬರ್ ಮೊದಲ ವಾರದಲ್ಲಿ ಬೆಳಗಾವಿಯಲ್ಲಿ ನಡೆಸುವಂತೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಆಗ್ರಹಿಸಿದ್ದಾರೆ.

**ಸಿಎಂಗೆ ಸಭಾಪತಿ ಹೊರಟ್ಟಿ ಪತ್ರ**

ಈ ಕುರಿತು ಮುಖ್ಯಮಂತ್ರಿಗೆ ಪತ್ರ ಬರೆದಿರುವ ಅವರು, ಪರಿಷತ್ ಸದಸ್ಯರಿಗೆ ತಮ್ಮ ಕ್ಷೇತ್ರಗಳಿಗೆ ಸಂಬಂಧಿಸಿದ ಸಮಸ್ಯೆಗಳ ಕುರಿತು ಚರ್ಚೆ ನಡೆಸಿ ಪರಿಹಾರ ಕಂಡುಕೊಳ್ಳಲು ಅನುಕೂಲವಾಗಬೇಕಿದೆ. ಈ ನಿಟ್ಟಿನಲ್ಲಿ ಅಧಿವೇಶನ ನಡೆಯುವ ದಿನಾಂಕವನ್ನು ಮೊದಲೇ ಪ್ರಕಟಿಸುವಂತೆ ಹೊರಟ್ಟಿ ಕೋರಿದ್ದಾರೆ.

ಅಲ್ಲದೇ ಬೆಳಗಾವಿಯಲ್ಲಿ ಅಧಿವೇಶನ ನಡೆಸುವ ಕುರಿತು ಮಾಧ್ಯಮಗಳಲ್ಲಿ ಹೇಳಿಕೆಗಳು ಪ್ರಕಟಗೊಂಡಿವೆ. ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ವಿಧಾನ ಪರಿಷತ್ತಿಗೆ ಆಯ್ಕೆಯಾಗಿರುವ 25 ಜನ ಸದಸ್ಯರು 2022ರ ಜನವರಿ 5 ರಂದು ನಿವೃತ್ತಿ ಹೊಂದಲಿದ್ದಾರೆ. ಈ ಬಾರಿಯ ಅಧಿವೇಶನವನ್ನು ತಾವು ಸೂಚಿಸಿದ ಅವಧಿಯಲ್ಲಿ ನಡೆಸುವುದರಿಂದ ನಿವೃತ್ತಿ ಹೊಂದಲಿರುವ 25 ಸದಸ್ಯರಿಗೆ ಪಾಲ್ಗೊಳ್ಳಲು ಅವಕಾಶ ದೊರೆಯಲಿದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

ಈ ಬಾರಿಯ ಅಧಿವೇಶನವನ್ನು ಬೆಳಗಾವಿ ಸುವರ್ಣಸೌಧದಲ್ಲಿ ನಡೆಸುವ ಕುರಿತು ಈಗಾಗಲೇ ಮುಖ್ಯಮಂತ್ರಿ ಜೊತೆ ಚರ್ಚಿಸಲಾಗಿದ್ದು, ಅವರು ಸಹ ಅದಕ್ಕೆ ಒಪ್ಪಿಗೆ ಸೂಚಿಸಿದ್ದಾರೆ ಎಂದು ಹೊರಟ್ಟಿ ತಿಳಿಸಿದ್ದಾರೆ.

Vijaya Karnataka 01.11.2021